# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 365
ಉತ್ತರಿಸಬೇಕಾದ ದಿನಾಂಕ : 18.07.2024
ಸದಸ್ಯರ ಹೆಸರು : ಶ್ರೀ ಐವನ್ ಡಿಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು.

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ನೂತನವಾಗಿ ಪ್ರಾರಂಭಿಸಲಾದ ಕ್ರೀಡಾ ಹಾಸ್ಟೆಲ್ ಕಾಮಗಾರಿ ಪೂರ್ಣಗೊಂಡಿದ್ದರೂ ಮಕ್ಕಳಿಗೆ ಪ್ರವೇಶವನ್ನು ನೀಡದಿರಲು ಕಾರಣವೇನು; | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಬಾಲಕಿಯರಿಗೆ ಪ್ರತ್ಯೇಕ ಕ್ರೀಡಾ ವಸತಿ ನಿಲಯ ಕಟ್ಟಡವನ್ನು ನಿರ್ಮಿಸುವ ಕಾಮಗಾರಿಗೆ ಸಂಬಂಧಿಸಿದಂತೆ ಅಂತಿಮ ಹಂತದ ಪ್ಲಂಬಿಂಗ್ ಮತ್ತಿತರ ಒಳಾಂಗಣ ಕಾಮಗಾರಿಗಳು ಬಾಕಿ ಇದ್ದ ಹಿನ್ನೆಲೆಯಲ್ಲಿ ಕ್ರೀಡಾಪಟುಗಳ ವಾಸ್ತವ್ಯಕ್ಕೆ ಒದಗಿಸಲು ಸಾಧ್ಯವಾಗಿರುವುದಿಲ್ಲ. ಪ್ರಸ್ತುತ ಕಟ್ಟಡದ ಸಂಪೂರ್ಣ ಕಾಮಗಾರಿ ಪೂರ್ಣಗೊಂಡಿರುತ್ತದೆ. ಶೀಘ್ರ ಕಟ್ಟಡವನ್ನು ಉದ್ಘಾಟಿಸಿ, ಮಹಿಳಾ ಕ್ರೀಡಾಪಟುಗಳ ವಾಸ್ತವ್ಯಕ್ಕೆ ಒದಗಿಸಲಾಗುವುದು. |
| ಆ) | 2024-25 ಸಾಲಿಗೆ ಸುಮಾರು 50 ಮಕ್ಕಳಿಗೆ ಪ್ರವೇಶ ನೀಡಲು ಕೂಡಲೇ ಕ್ರಮಕೈಗೊಳ್ಳಲಾಗುವುದೇ; | ಮಂಗಳೂರಿನಲ್ಲಿರುವ ದಕ್ಷಿಣ ಕನ್ನಡ ಜಿಲ್ಲಾ ಕ್ರೀಡಾ ವಸತಿ ನಿಲಯಕ್ಕೆ ಅಥ್ಲೆಟಿಕ್ಸ್ ಮತ್ತು ವಾಲಿಬಾಲ್ ಕ್ರೀಡಾ ವಿಭಾಗಗಳಲ್ಲಿ ಬಾಲಕ ಮತ್ತು ಬಾಲಕಿಯರು ಸೇರಿದಂತೆ ಒಟ್ಟು 50 ಕ್ರೀಡಾಪಟುಗಳ ಪ್ರವೇಶಬಲ ನಿಗದಿಪಡಿಸಲಾಗಿದೆ. ಪ್ರಸ್ತುತ 2024-25 ನೇ ಸಾಲಿಗೆ ಕ್ರೀಡಾ ವಸತಿ ನಿಲಯದಲ್ಲಿ 28 ಬಾಲಕರು ಮತ್ತು 18 ಬಾಲಕಿಯರು ಸೇರಿದಂತೆ ಒಟ್ಟು 46 ಕ್ರೀಡಾಪಟುಗಳು ದಾಖಲಾತಿ ಪಡೆದಿರುತ್ತಾರೆ. ಅರ್ಹ ಕ್ರೀಡಾಪಟುಗಳು ಲಭ್ಯವಾದಲ್ಲಿ ಬಾಕಿ 04 ಪ್ರವೇಶಬಲವನ್ನು ಭರ್ತಿ ಮಾಡಲಾಗುವುದು. |
| ಇ) | ಈ ಹಾಸ್ಟೆಲ್ ಯೋಜನೆ ಎಂದು ಪ್ರಾರಂಭಗೊಳಿಸಲಾಯಿತು, ಇದಕ್ಕೆ ತಗುಲಿದ ವೆಚ್ಚ ಎಷ್ಟು? (ವಿವರ ನೀಡುವುದು) | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಪ್ರತ್ಯೇಕವಾಗಿ ಬಾಲಕಿಯರಿಗೆ ಕ್ರೀಡಾ ವಸತಿ ನಿಲಯವನ್ನು ನಿರ್ಮಿಸುವ ಕಾಮಗಾರಿಯನ್ನು ರೂ 150.00 ಲಕ್ಷಗಳ ವೆಚ್ಚದಲ್ಲಿ ನಿರ್ಮಿತಿ ಕೇಂದ್ರ, ದಕ್ಷಿಣ ಕನ್ನಡ ಜಿಲ್ಲೆ ಇವರು ಕೈಗೊಳ್ಳಲು ದಿನಾಂಕ: 10-01-2022 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಸದರಿ ಕಾಮಗಾರಿಗೆ ಸಂಬಂಧಿಸಿದಂತೆ ನಿರ್ಮಿತಿ ಕೇಂದ್ರ, ದಕ್ಷಿಣ ಕನ್ನಡ ಜಿಲ್ಲೆ ಇವರಿಗೆ ರೂ 140.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. |

ಸಂ: ಯುಸೇಕ್ರೀ ಇಬಿಪಿ/56/2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ



ile No. YSD-EPB/56/2024-YSD_DDO-YOUTH-SEC (Computer No. 1258588)